MARCH 25,2025

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ರಾಜ್ಯದ ಎಲ್ಲ ಅಂಗನವಾಡಿಗಳನ್ನು, ಮೇಲ್ದರ್ಜೆಗೇರಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸ್ತ್ರೀ ಶಕ್ತಿ ಗುಂಪುಗಳ ವಿಭಾಗೀಯ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಉದ್ಘಾಟಿಸಿ, ಮಾತನಾಡಿದರು. ಪ್ರತಿಯೊಂದು ಮಗುವಿನ ಹೆಸರಲ್ಲಿ ಗಿಡ ನೆಡುವ ಕಾರ್ಯಕ್ರಮ, ಭಾಗ್ಯಲಕ್ಷ್ಮೀ ಯೋಜನೆ, ಸುಕನ್ಯಾ ಸಮೃದ್ಧಿ ಮೂಲಕ, ಮಹಿಳೆ ಮತ್ತು ಮಗುವಿನ ಸರ್ವಾಂಗೀಣ ಅಭಿವೃದ್ಧಿಗೆ, ರಾಜ್ಯ ಸರ್ಕಾರ ಬದ್ಧವಾಗಿದೆ ಎಂದರು.

<><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಟಿ.ಬಿ ಮುಕ್ತ ಭಾರತ ಸಂಕಲ್ಪದಡಿ 2030 ರೊಳಗೆ ಸಂಪೂರ್ಣ ಕ್ಷಯ ನಿರ್ಮೂಲನೆಯ ಗುರಿ ಹೊಂದಲಾಗಿದೆ. ನಿ–ಕ್ಷಯ ಪೋ ಣ ಅಭಿಯಾನದಡಿ ಉತ್ತಮ ಸಾಧನೆ ಮಾಡಿರುವ, ಬಳ್ಳಾರಿ ಜಿಲ್ಲೆ ಕೊರ್ಲಗುಂದಿ ಗ್ರಾಮ ಪಂಚಾಯಿತಿಗೆ ಗಾಂಧಿ ಪುತ್ಥಳಿ ನೀಡಿ ಗೌರವಿಸಲಾಯಿತು.

ವಿಶೇಷ ಗೌರವಕ್ಕೆ ಭಾಜನವಾದ ಹಿನ್ನೆಲೆ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಅಮರಶೆಟ್ಟಿ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಬೈಟ್: ಪ್ರಕಾಶ ಅಮರಶೆಟ್ಟಿ 36 ಸೆಕೆಂದುಗಳು

<><><>

ಧಾರವಾಡ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ 35 ಗ್ರಾಮ ಪಂಚಾಯಿತಿಗಳನ್ನು ಕ್ಷಯ ರೋಗ ಮುಕ್ತಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಾ ಪ್ರಭು ಹೇಳಿದರು. ವಿಶ್ವ ಕ್ಷಯ ರೋಗ ನಿರ್ಮೂಲನಾ ದಿನಾಚರಣೆ ಅಂಗವಾಗಿ ಜರುಗಿದ ಕಾರ್ಯಕ್ರಮದಲ್ಲಿ ಕ್ಷಯ ಮುಕ್ತ ಗ್ರಾಮ ಪಂಚಾಯಿತಿಗಳ ಪ್ರತಿನಿಧಿಗಳನ್ನು ಗೌರವಿಸಿ ಅವರು ಮಾತನಾಡಿದರು.

<><><>

ಹಾಸನ ಜಿಲ್ಲೆಯ ಅರಣ್ಯದಂಚಿನ ಗ್ರಾಮಗಳ ಜನರಲ್ಲಿ ಆತಂಕ ಸೃಷ್ಟಿಸಿದ್ದ, ಎರಡು ಕಾಡಾನೆಗಳನ್ನು ಸೆರೆ ಹಿಡಿದು ಬೇರೆಡೆಗೆ ಸ್ಥಳಾಂತರಿಸುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ. ಸವಾಲಿನ ಕೆಲಸವನ್ನು ಕೈಗೆತ್ತಿಕೊಂಡು, ಶ್ರಮಿಸಿದ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿನಂದನೆ ಸಲ್ಲಿಸಿದ್ದಾರೆ.

<><><>

ಬೆಂಗಳೂರು ಧನ್ವಂತರಿ ರಸ್ತೆ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯದ ನೂತನ ವಿದ್ಯಾರ್ಥಿ ನಿಲಯ ಹಾಗೂ ಶ್ರೀ ಜಯಚಾಮರಾಜೇಂದ್ರ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆಯ, ಹೈಟೆಕ್ ಪಂಚಕರ್ಮ ವಿಭಾಗದ ಕೊಠಡಿಗಳನ್ನು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಉದ್ಘಾಟಿಸಿದರು.

<><><>

ಭಾರತೀಯ ಭೂ ಸೇನೆಯ, ದಕ್ಷಿಣ ವಲಯದ ಮುಖ್ಯಸ್ಥ, ಲೆಫ್ಟಿನೆಂಟ್ ಜನರಲ್ ಧೀರಜ್ ಸೇತ್ ನೇತೃತ್ವದಲ್ಲಿ, ಮಡಿಕೇರಿಯಲ್ಲಿ ನಿವೃತ್ತ ಸೈನಿಕರ ಕುಂದು ಕೊರತೆಗಳನ್ನು ಆಲಿಸಿ, ಪರಿಹರಿಸುವ ಸಮಾವೇಶ ನಡೆಯಿತು. ಕೊಡಗಿನಲ್ಲಿ ನೆಲೆಸಿರುವ ಮಾಜಿ ಯೋಧರು, ವೀರ ನಾರಿಯರು, ಮಾಸಿಕ ಪಿಂಚಣಿ, ದಾಖಲೆಗಳಲ್ಲಿನ ಲೋಪ ದೋ ’ ಸರಿಪಡಿಸಲು ವ್ಯವಸ್ಥೆ ಮಾಡಲಾಗಿತ್ತು. ಭಾರತೀಯ ಸೇನೆಯ 8 ವಿಭಾಗಗಳ ಅಧಿಕಾರಿಗಳು, ಸ್ಥಳದಲ್ಲೇ ಹಾಜರಿದ್ದು, ಅನುಕೂಲ ಕಲ್ಪಿಸಿದರು.

<><><>

ಹಾಲಿನ ದರ ಹೆಚ್ಚಿಸುವ ಬಗ್ಗೆ, ಒಕ್ಕೂಟಗಳ ಅಭಿಪ್ರಾಯ ಸಂಗ್ರಹಿಸಲಾಗಿದೆ; ದರ ಹೆಚ್ಚಿಸಿದಲ್ಲಿ, ಆ ಮೊತ್ತ ಸಂಪೂರ್ಣ ಹೈನುಗಾರರಿಗೇ ದೊರೆಯಬೇಕು ಎಂಬುದು, ಸರ್ಕಾರದ ದೃಢ ನಿಲುವು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮುಖ್ಯಮಂತ್ರಿಯವರು, ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತದ ಪದಾಧಿಕಾರಿಗಳೊಂದಿಗೆ, ಬೆಂಗಳೂರಿನಲ್ಲಿ ಸಭೆ ನಡೆಸಿದರು. ಮುಂದಿನ ಮೂರು ತಿಂಗಳಲ್ಲಿ, ಆಡಳಿತಾತ್ಮಕ ವೆಚ್ಚವನ್ನು ಶೇಕಡ ಎರಡೂವರೆಯಷ್ಟು, ಇಳಿಸಬೇಕು ಎಂದು, ಅವರು ಸೂಚಿಸಿದರು.

<><><>

‘ಕೃಷಿ ಭಾಗ್ಯ ಯೋಜನೆ’ ಅಡಿ, ನೀರಿನ ಕೊರತೆ ಇರುವ, ರಾಜ್ಯದ 224 ತಾಲೂಕುಗಳಲ್ಲಿ, ಕೃಷಿ ಹೊಂಡ ನಿರ್ಮಾಣ ಯೋಜನೆ ಜಾರಿಗೊಂಡಿದ್ದು, 15 ರಿಂದ 30 ದಿನಗಳ, ಅಲ್ಪಾವಧಿ ಬೆಳೆಗೆ, ಬಿರು ಬೇಸಿಗೆಯಲ್ಲೂ ನೀರು ಲಭ್ಯವಿದೆ ಎಂದು, ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯದ ಅಂಬೇಡ್ಕರ್ ಭವನದಲ್ಲಿ, ಮಹಾತ್ಮ ಗಾಂಧಿ ನರೇಗಾ ಯೋಜನೆ ಅಡಿ, ‘ಕೃಷಿ ಕವಚ’ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು. ಖ್ಯಾತ ಅರ್ಥಶಾಸ್ತ್ರಜ್ಞ ಮನಮೋಹನ್ ಸಿಂಗ್ ಅವರ ದೂರದೃಷ್ಟಿಯ ಫಲವಾಗಿ, ಉದ್ಯೋಗ ಖಾತ್ರಿ ಹಾಗೂ ಸರ್ವರಿಗೂ ಆಹಾರ ಖಾತ್ರಿ ಯೋಜನೆ ಜಾರಿಗೊಂಡವು ಎಂದರು.

<><><>

ಮಾಜಿ ಸಚಿವ ಹಾಗೂ ಮಾಜಿ ಸಂಸದರಾದ ಜಯಪ್ರಕಾಶ್ ಹೆಗ್ಡೆ ನೇತೃತ್ವದ ಕೊರಗ ಸಮುದಾಯದ ಮುಖಂಡರ ನಿಯೋಗವು, ಮುಖ್ಯಮಂತ್ರಿ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ತಮ್ಮ ಸಮುದಾಯದ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮನವಿಯನ್ನು ಸಲ್ಲಿಸಿತು.

<><><>

ಆಕಾಶವಾಣಿಯ ಬಹುಶ್ರುತ ಕಾರ್ಯಕ್ರಮ, 'ಮನ್ ಕಿ ಬಾತ್' ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 30, ಬರುವ ಭಾನುವಾರದಂದು, ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯನ್ನುದ್ದೇಶಿಸಿ, ಮಾತನಾಡಲಿದ್ದಾರೆ. ಇದು ಮನದ ಮಾತಿನ 120ನೇ ಸಂಚಿಕೆಯಾಗಿದೆ.

<><><>

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>